ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

*ಸಂಖ್ಯೆ : ಸಂಖ್ಯೆ : ಸಿ5(2)ಬಡ್ತಿ-01/2014-15* ದಿನಾಂಕ : 09/02/2015

**ಅಧಿಸೂಚನೆ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧೀಕ್ಷಕರುಗಳಿಗೆ ಸಹಾಯಕ ನಿರ್ದೇಶಕರು (ಬೋಧಕೇತರ) / ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 02/02/2015 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4:- ಈ ಕಛೇರಿಯ ಅಧಿಸೂಚನೆ ಸಂಖ್ಯೆ : ಸಿ5(2)ಬಡ್ತಿ-25/2012-13 ದಿನಾಂಕ : 05/11/2013

* * * * * *

**ಪ್ರಸ್ತಾವನೆ :**

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು(ಭೋದಕೇತರ) ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು(ಭೋದಕೇತರ) ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಈ ಹಿಂದೆ ಬಡ್ತಿಯನ್ನು ನಿರಾಕರಿಸಿರುವ ಅಧೀಕ್ಷಕರುಗಳಿಗೆ ಉಲ್ಲೇಖಿತ (4) ರ ಈ ಕಛೇರಿಯ ಅಧಿಸೂಚನೆಯಲ್ಲಿ ಅಂಗೀಕಾರವನ್ನು ನೀಡಿದ್ದ ಅಧೀಕ್ಷಕರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಪತ್ರಾಂಕಿತ ವ್ಯವಸತಾಪಕರ ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 02/02/2015 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ಅರ್ಹ ಅಧೀಕ್ಷಕರುಗಳು ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಬೇಕಾಗಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಆದೇಶ :-**

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 20000-36300 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 21600-40050 ರ ಪತ್ರಾಂಕಿತ ವ್ಯವಸ್ಥಾಕರು / ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಜೇಷ್ಟತಾ ಸಂಖ್ಯೆ | ಅಧೀಕ್ಷಕರ ಹೆಸರು ಮತ್ತು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ ಶ್ರೀಮತಿ / ಶ್ರೀ |
|---|---|---|
| 1 | 22 | ಆರ್. ದೇವರಾಜಪ್ಪ, ಅಧೀಕ್ಷಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು. |
| 2 | 23 | ಎಂ.ಎಸ್. ನಾಗರತ್ನ, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳುರು. |
| 3 | 86 | ಜಿ.ಆರ್. ತೀರ್ಥಗಿರೀಶ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬಂಗಾರಪೇಟೆ, ಕೋಲಾರ ಜಿಲ್ಲೆ |
| 4 | 87 | ಎಲ್. ವಾಸುಕೀಶ್, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಮೈಸೂರು |
| 5 | 88 | ಅನಂತಪದ್ಮನಾಭ ರಾವ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ತಾಲ್ಲೂಕು ವಲಯ, ಮೈಸೂರು |
| 6 | 90 | ಆರ್. ವರದಾಂಬ, ಅಧೀಕ್ಷಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು |
| 7 | 91 | ಜಿ.ಎನ್. ವೆಂಕಟಕೃಷ್ಣಯ್ಯ ಶೆಟ್ಟಿ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೋಲಾರ ಜಿಲ್ಲೆ, ಕೋಲಾರ |
| 8 | 92 | ಶಾಲಿನಿ ವೀಣಾಕುಮಾರಿ, ಅಧೀಕ್ಷಕರು, ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು |
| 9 | 94 | ಪಿ. ನರಹರಿರಾವ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಗುಡಿಬಂಡೆ, ಚಿಕ್ಕಬಳ್ಳಾಪುರ ಜಿಲ್ಲೆ |
| 10 | 96 | ಹೆಚ್.ಎಸ್. ಶಿವಸುಂದರ್, ಅಧೀಕ್ಷಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು |
| 11 | 149 | ಹೆಚ್. ಕಾಂತರಾಜು, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ತುಮಕೂರು |

ಸ್ಥಾನಪನ್ನ ಬಡ್ತಿಯನ್ನು ಹೊಂದಿರುವ ಮೇಲ್ಕಂಡ ಅಧೀಕ್ಷಕರುಗಳಿಗೆ ಸ್ಥಳ ಆಯ್ಕೆ ಪ್ರಕ್ರಿಯೆ ಕೌನ್ಸಿಲಿಂಗನ್ನು **ದಿನಾಂಕ : 18/02/2015** ರಂದು **ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು** ಇಲ್ಲಿ ಬೆಳಿಗ್ಗೆ **10.30** ಗಂಟೆಗೆ ನಡೆಸಲಾಗುವುದು. ಎಲ್ಲ ಅಧೀಕ್ಷಕರುಗಳು ಕೌನ್ಸಿಲಿಂಗ್‌ನಲ್ಲಿ ಅವರ ಸ್ವಂತ ಖರ್ಚಿನಲ್ಲಿ ಹಾಜರಾಗಿ ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳಲು ತಿಳಿಸಿದೆ. ತಪ್ಪಿದ್ದಲ್ಲಿ ಈ ಕಛೇರಿಯಿಂದಲೇ ಸ್ಥಳ ನಿಯುಕ್ತಿಯ ಬಗ್ಗೆ ನಿರ್ಧರಿಸಿ ನಿಯುಕ್ತಿಗೊಳಿಸಿ ಆದೇಶಿಸಲಾಗುವುದು.

(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

(ಎನ್. ಚಂದ್ರಶೇಖರ್)
ಜಂಟಿ ಆಯುಕ್ತರು(ಆಡಳಿತ)

ಇವರಿಗೆ:

1) ಸಂಬಂಧಿಸಿದ ಕಛೇರಿ ಮುಖ್ಯಸ್ಥರಿಗೆ.
2) ಸಂಬಂಧಿಸಿದ ಅಧೀಕ್ಷಕರುಗಳಿಗೆ.